ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ : 22ನೇ ಜುಲೈ, 2019

ಹೆಸರುಕಾಳಿಗೆ ಬೆಂಬಲ ಬೆಲೆ ನೀಡುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

458 (460) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಖರೀದಿಸುವ ಹೆಸರುಕಾಳಿಗೆ ನೀಡುವ ಬೆಂಬಲ ಬೆಲೆ ಎಷ್ಟು;

(ಆ) ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಎಷ್ಟು ಮೆಟ್ರಿಕ್ ಟನ್ ಹೆಸರುಕಾಳು ಖರೀದಿಸುವುದಾಗಿ ತಿಳಿಸಲಾಗಿತ್ತು

ಈವರೆಗೆ ಎಷ್ಟು ಮೆಟ್ರಿಕ್ ಟನ್ ಹೆಸರುಕಾಳು ಖರೀದಿಸಲಾಗಿದೆ; ಇನ್ನು ಖರೀದಿಸಲು ಎಷ್ಟು ಬಾಕಿ ಇದೆ;

(ಇ) ರೈತರು ಬೆಳೆ ಬೆಳೆಗಳನ್ನು ಸರ್ಕಾರವು ಖರೀದಿಸದೆ ಇರುವುದರಿಂದ ಆತ್ಮಹತ್ಯೆಗೆ ಶರಣಾದ ರೈತರ ಸಂಖ್ಯೆ ಎಷ್ಟು;

(ಈ) ರೈತರ ಸಾಲ ಮನ್ನಾಕ್ಕಿಂತ ರೈತರ ಬೆಳೆದ ಬೆಳೆಗಳನ್ನು ಖರೀದಿಸುವ ಮೂಲಕ ರೈತರನ್ನು ಉಳಿಸುವ ಯಾವ ಕಾರ್ಯಕ್ರಮಗಳನ್ನು ಸರ್ಕಾರ ಕೈಗೊಂಡಿದೆ; ಇದುವರೆಗೆ ರೈತರಿಂದ ಯಾವ ಯಾವ ಬೆಳೆಗಳನ್ನು ಬೆಂಬಲ ಬೆಲೆ ನೀಡಿ ಖರೀದಿಸಲಾಗಿದೆ; ರೈತರು ಹೆಚ್ಚುವರಿ ಬೆಳೆದ ಬೆಳೆಗಳನ್ನು ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?